**ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ರವರ ನ್ಯಾಯಾಲಯ,**

**ತರೀಕೆರೆ**

**ಸಂಚಾರಿ ನ್ಯಾಯಾಲಯ, ಅಜ್ಜಂಪುರ**

**ಸಿ.ಸಿ.ನಂಃ 1116/2024**

**ಫಿರ್ಯಾದುದಾರರುಃ** ಸರ್ಕಾರದ ಪರವಾಗಿ ಅಜ್ಜಂಪುರ ಪೊಲೀಸರು

**-: ವಿರುದ್ಧ :-**

**ಆರೋಪಿತರುಃ**

1. ಶ್ರೀ ಸುದೀಪ,
ಬಿನ್ ಶ್ರೀ ಕುಮಾರಪ್ಪ,
20 ವರ್ಷಗಳು,

2. ಶ್ರೀ ಕುಮಾರಪ್ಪ,
ಬಿನ್ ಲೇಟ್ ಶ್ರೀ ಸಿದ್ದಪ್ಪ
48 ವರ್ಷ,

3. ಶ್ರೀಮತಿ ಮೀನಾಕ್ಷಮ್ಮ,
ಕೋಂ ಶ್ರೀ ಕುಮಾರಪ್ಪ,
41 ವರ್ಷ,

4. ಕುಮಾರಿ ಅರ್ಚನ,
ಬಿನ್ ಶ್ರೀ ಕುಮಾರಪ್ಪ,
21 ವರ್ಷಗಳು,

ಎಲ್ಲರ ವಾಸಃ ಜಾವೂರು ಗ್ರಾಮ,
ಅಜ್ಜಂಪುರ ತಾಲ್ಲೂಕು.

**ದೋಷಾರೋಪಣೆ**

ಶ್ರೀ. ರಾಹುಲ್ ಶೆಟ್ಟಿಗಾರ್, ಬಿ.ಕಾಂ.(Hons.), ಎಲ್‌ಎಲ್.ಬಿ., ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ ಪ್ರ.ದ.ನ್ಯಾದಂ., ತರೀಕೆರೆ ಆದ ನಾನು ಆರೋಪಿಗಳಾದ ನಿಮ್ಮ ಮೇಲೆ ಮಾಡುವ ದೋಷಾರೋಪಣೆ ಏನೆಂದರೆಃ

ದಿನಾಂಕ 24.03.2024 ರಂದು ರಾತ್ರಿ 8.30 ಗಂಟೆಗೆ ಅಜ್ಜಂಪುರ ಪೋಲೀಸ್ ಠಾಣಾ ಸರಹದ್ದಿನ ಜಾವೂರು ಗ್ರಾಮದಲ್ಲಿ ಚಾಸಾ-1/ ಶ್ರೀಮತಿ ರುದ್ರಮ್ಮ ರವರು ತನ್ನ ಮನೆಯಿಂದ ಹೊರಟು ಶ್ರೀ ಕಿರಾಳಮ್ಮ ದೇವಸ್ಥಾನದ ಹತ್ತಿರ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿರುವಾಗ ಜಾವೂರು ಗೇಟ್ ಕಡೆಯಿಂದ ನಿಮ್ಮಲ್ಲಿ 1 ನೇ ಆರೋಪಿ ತನ್ನ ಬೈಕ್ ನಲ್ಲಿ ಜೋರಾಗಿ ಚಾಸಾ-1 ರವರಿಗೆ ತಾಗಿಸಲು ಬಂದಿದ್ದು, ಚಾಸಾ-1 ರವರು ನಿನಗೆ ಕಣ್ಣು ಕಾಣುವುದಿಲ್ಲವ ನೆಟ್ಟಗೆ ಹೋಗಕ್ಕೆ

ಬರುವುದಿಲ್ಲವಾ ಎಂದು ಹೇಳಿದ್ದಕ್ಕೆ, ನಿಮ್ಮಲ್ಲಿ 1 ನೇ ಆರೋಪಿ ಬೈಕ್ ನಿಂದ ಕೆಳಗೆ ಇಳಿದು ಬಂದು ಏನೇ ಬೇರ್ವಸಿ ಮುಂಡೆ ಕತ್ತೆಗೆ ಆದ ವಯಸ್ಸು ಆಗಿದೆ ನನಗೆ ಮಾತನಾಡುತ್ತೀಯಾ ಎಂದೂ ಹಾಗೂ ನಿಮ್ಮಲ್ಲಿ 2 ರಿಂದ 4 ನೇ ಆರೋಪಿತರು ಸಮಾನ ಉದ್ದೇಶದಿಂದ ಚಾಸಾ-1 ರವರಿಗೆ ಹೀನಾಮಾನವಾಗಿ ಬೈದಿದ್ದು ಹಾಗೂ ಜಗಳ ಬಿಡಿಸಲು ಬಂದ ಚಾಸಾ-2/ ಶ್ರೀ ಪ್ರಕಾಶ್ ಜೆ.ಟಿ ರವರಿಗೂ ಸೂಳೆಮಗನೇ ನೀನು ಯಾರೋ ಪರ ವಹಿಸಿ ಬರಲು ಎಂದು ಚಾಸಾ-1 ಮತ್ತು 2 ರವರ ಶಾಂತಿಭಂಗ ಮಾಡುವ ಉದ್ದೇಶದಿಂದ ಅವಾಚ್ಯ ಶಬ್ದಗಳಿಂದ ಬೈದು ಅವಮಾನಿಸಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 504 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಎರಡನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ರಸ್ತೆಯಲ್ಲಿಯೇ ಚಾಸಾ-1 ರವರ ಸೀರೆ ಹಿಡಿದು ಎಳೆದಾಡಿ ನಿನ್ನನ್ನು ಬಟ್ಟೆ ಬಿಚ್ಚಿ ಹೊಡೆಯುತ್ತೇನೆ ಎಂದು ಅಪರಾಧಿಕ ಬಲಪ್ರಯೋಗವನ್ನು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 354(ಬಿ) ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಮೂರನೇಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, ನಿಮ್ಮಲ್ಲಿ 1 ನೇ ಆರೋಪಿ ಚಾಸಾ-1 ರವರಿಗೆ ಕೈಯಿಂದ ಹೊಡೆದಿರತ್ತೀರಿ ಹಾಗೂ ನಿಮ್ಮಲ್ಲಿ 2 ರಿಂದ 4 ನೇ ಆರೋಪಿತರು ಚಾಸಾ-2 ರವರಿಗೆ ಹೊಡೆದಿರುತ್ತೀರಿ ಮತ್ತು ಅವರಿಗೆ ಸಾಮಾನ್ಯ ಸ್ವರೂಪದ ನೋವುಂಟು ಮಾಡಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 323 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಕೊನೆಯದಾಗಿ, ಮೇಲೆ ಹೇಳಿದ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ 1 ರಿಂದ 4 ನೇ ಆರೋಪಿಗಳಾದ ನೀವು ಅಪರಾಧ ಮಾಡುವ ಸಮಾನ ಉದ್ದೇಶವನ್ನು ಮುಂದುವರಿಸಿ, 1 ರಿಂದ 4 ನೇ ಆರೋಪಿಗಳಾದ ನೀವು ಚಾಸಾ-1 ಮತ್ತು 2 ರವರಿಗೆ ಸುಟ್ಟು ಹಾಕುತ್ತೇವೆ ಎಂದು ಕೊಲೆ

ಬೆದರಿಕೆ ಹಾಕಿರುತ್ತೀರಿ. ಈ ರೀತ್ಯ 1 ರಿಂದ 4 ನೇ ಆರೋಪಿಗಳಾದ ನೀವು ಭಾರತ ದಂಡ ಸಂಹಿತೆ ಕಲಂ 506 ಸಹವಾಚಕ ಕಲಂ 34 ರಂತೆ ದಂಢೀಸಲ್ಪಡುವ ಶಿಕ್ಷಾರ್ಹ ಅಪರಾದವನ್ನು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮಾಡಿರುತ್ತೀರಿ.

ಸದರಿ ಮೇಲ್ಕಂಡ 1 ರಿಂದ 4 ನೇ ಆರೋಪಿಗಳಾದ ನೀವು ಈ ನ್ಯಾಯಾಲಯದ ಸಂಜ್ಞೆಯದೊಳಗೆ ಮೇಲೆ ಹೇಳಿದ ಅಪರಾದಗಳನ್ನು ಮಾಡಿದ್ದರಿಂದ, ಅವುಗಳು ಈ ನ್ಯಾಯಾಲಯದಿಂದ ವಿಚಾರಣೆ ಆಗತಕ್ಕದ್ದೆಂದು ಆದೇಶಿಸಲಾಗಿದೆ.

ಪ್ರಃ1. ಈಗ ಮೇಲೆ ಓದಿ ಹೇಳಿದ ದೋಷಾರೋಪಣೆಯನ್ನು ಕೇಳಿದಿರಾ? ಅವುಗಳು ನಿಮಗೆ ಅರ್ಥವಾಯಿತೇ?

ಆರೋಪಿಗಳ ಉತ್ತರಃ

ಆರೋಪಿ 1: Yes

ಆರೋಪಿ 2: Yes

ಆರೋಪಿ 3: Yes

ಆರೋಪಿ 4: Yes

ಪ್ರಃ2. ನೀವು ದೋಷಾರೋಪಣೆಯನ್ನು ಒಪ್ಪಿಕೊಳ್ಳುವಿರೋ ಅಥವಾ ವಿಚಾರಣೆಯಾಗಬೇಕೋ?

ಆರೋಪಿಗಳ ಉತ್ತರಃ

ಆರೋಪಿ 1: Pleaded not guilty and claimed to be tried

ಆರೋಪಿ 2: Pleaded not guilty and claimed to be tried

ಆರೋಪಿ 3: Pleaded not guilty and claimed to be tried

ಆರೋಪಿ 4: Pleaded not guilty and claimed to be tried

(ಆರೋಪಿತರಿಗೆ ದೋಷಾರೋಪಣೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ತಿಳಿಸಿ ಅವರ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ಬರೆದುಕೊಳ್ಳಲಾಯಿತು. ಅದು ಸತ್ಯವಾಗಿಯೂ ಮತ್ತು ಸರಿಯಾಗಿಯೂ ಇರುತ್ತದೆ ಅಂತಾ ಪ್ರಮಾಣಿಕರಿಸುತ್ತೇನೆ)

ದಿನಾಂಕ : 01.08.2025

ಸಹಿ/-

(ರಾಹುಲ್ ಶೆಟ್ಟಿಗಾರ್)

ಸಿವಿಲ್ ನ್ಯಾಯಾಧೀಶರು ಮತ್ತು ಹೆಚ್ಚುವರಿ

ಪ್ರ.ದ.ನ್ಯಾದಂ., ತರೀಕೆರೆ.

(ಸಂಚಾರಿ ನ್ಯಾಯಾಲಯ, ಅಜ್ಜಂಪುರ)

ಆರೋಪಿತರ ಸಹಿಃ